# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **:** | **393** |
| **ಸದಸ್ಯರ ಹೆಸರು** | **:** | **ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | **:** | **10.03.2025** |
| **ಉತ್ತರಿಸುವ ಸಚಿವರು** | **:** | **ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು** |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಖಟಕಚಿಂಚೋಳಿ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಕಂಬೈನ್ಡ್ ಕ್ಲಾಸ್ ಹಾಗೂ ಮೂಲಭೂತ ಸೌಕರ್ಯವಿಲ್ಲದೆ ವಿದ್ಯಾರ್ಥಿಗಳ ಶಿಕ್ಷಣ ಕಲಿಕೆಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಖಟಕಚಿಂಚೋಳಿ ಶಾಲೆಯು 1 ರಿಂದ 7ನೇ ತರಗತಿ ಕನ್ನಡ ಮತ್ತು ಉರ್ದು ಮಾಧ್ಯಮದಲ್ಲಿ ಶಾಲೆ ನಡೆಯುತ್ತಿದ್ದು, ಸದ್ಯ ಉರ್ದು ಮಾಧ್ಯಮಕ್ಕೆ 05 ಕೋಣೆಗಳು ಕನ್ನಡ ಮಾಧ್ಯಮಕ್ಕೆ 07 ಸುಸಜ್ಜಿತ ಕೋಣೆಗಳು ಲಭ್ಯವಿವೆ. |
| ಆ) | ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; (ವಿವರ ಒದಗಿಸುವುದು) | ಪ್ರಸ್ತುತ ಹಾಲಿ 12 ಕೊಠಡಿಗಳಲ್ಲಿ ತರಗತಿಗಳು ನಡೆಯುತ್ತಿವೆ. ಈ ಹಿಂದೆ 4 ಕೊಠಡಿಗಳನ್ನು ಹೊಸ ಕೊಠಡಿ ನಿರ್ಮಾಣ ಸಂಬಂಧ ನೆಲಸಮಗೊಳಿಸಲಾಗಿರುತ್ತದೆ. ಅದಕ್ಕಾಗಿ ಕೋಣೆಗಳ ಸಮಸ್ಯೆ ಇದ್ದು, ಉರ್ದು ಮತ್ತು ಕನ್ನಡ ಮಾಧ್ಯಮದ ಲಭ್ಯ ಕೋಣೆಗಳನ್ನು ಉಪಯೋಗ ಮಾಡಿಕೊಂಡು ತರಗತಿಗಳನ್ನು ನಡೆಸಲಾಗುತ್ತಿದೆ.<br>2024-25ನೇ ಸಾಲಿನ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಮೈಕ್ರೋ ಯೋಜನೆ ಅಡಿಯಲ್ಲಿ 18 ಕೊಠಡಿಗಳನ್ನು ರೂ.5.00 ಕೋಟಿ ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು, ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ. |
| ಇ) | ಈ ಜಿಲ್ಲೆಯ ವ್ಯಾಪ್ತಿಯಲ್ಲಿ ಸರ್ಕಾರಿ ಶಾಲೆಗಳು ಶಿಥಿಲಾವ್ಯವಸ್ಥೆಯಲ್ಲಿದ್ದು ಶಿಥಿಲಾವ್ಯವಸ್ಥೆಯಲ್ಲಿರುವ ಕಟ್ಟಡ ನವೀಕರಣಕ್ಕೆ ಸರ್ಕಾರ ಕೈಗೊಂಡ ಕ್ರಮವೇನು? (ಮಾಹಿತಿ ನೀಡುವುದು) | ರಾಜ್ಯ ಯೋಜನೆಯಡಿ ಬೀದರ್ ಜಿಲ್ಲೆಯ ಸರ್ಕಾರಿ ಶಾಲಾ ಕೊಠಡಿಗಳ ದುರಸ್ತಿಗೆ ಕಳೆದ 2 ವರ್ಷಗಳಲ್ಲಿ ಕೆಳಕಂಡಂತೆ ಅನುದಾನ ಬಿಡುಗಡೆ ಮಾಡಲಾಗಿದೆ. (ಕೆಳಗಿನ ಕೋಷ್ಟಕ) |

| ಕ್ರ ಸಂ | ವರ್ಷ | ಶಾಲೆಗಳ ಸಂಖ್ಯೆ | ಕೊಠಡಿಗಳ ಸಂಖ್ಯೆ | ಬಿಡುಗಡೆಯಾದ ಅನುದಾನ |
|---|---|---|---|---|
| 1 | 2023–24 | 257 | 1074 | 579.40 |
| 2 | 2024–25 | 65 | 375 | 227.12 |
| | ಒಟ್ಟು | 322 | 1449 | 806.52 |

2024-25ನೇ ಸಾಲಿಗಾಗಿ ಕೆಕೆಆರ್‌ಡಿಬಿ ಅನುದಾನ ದಡಿಯಲ್ಲಿ ಜಿಲ್ಲೆಯ ವಿವಿಧ ಶಾಲೆಗಳಲ್ಲಿ ಹೊಸ ಕಟ್ಟಡ, ಹೊಸ ಕೋಣೆ ಮತ್ತು ಶಾಲಾ ರಿಪೇರಿ ಸಂಬಂಧ ರೂ.2755.95ಲಕ್ಷ ಅನುದಾನ ಮಂಜೂರಾಗಿದ್ದು, ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿವೆ.

**ಇಪಿ 64 ಯೋಸಕ 2025**

**(ಎಸ್.ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**